ಪಿ ಡಬ್ಲ್ಯೂ 1

ದಿನಾಂಕ 13-06-2025 ರಂದು ಸಾಕ್ಷಿಯನ್ನು ಕರೆಯಿಸಿ ಸತ್ಯ ಪ್ರತಿಜ್ಞೆ ಬೋಧಿಸಲಾಯಿತು.

**ಮುಂದುವರೆದ ಪಾಟೀ ಸವಾಲುಃ ಪ್ರತಿವಾದಿ ಪರ ವಕೀಲರಿಂದಃ**

ಸಾಕ್ಷಿಗೆ ತನ್ನ ಮುಖ್ಯ ವಿಚಾರಣೆಯ 4 ನೇ ಪ್ಯಾರಾದಲ್ಲಿ ಹೇಳಿರುವಂತೆ ಪ್ರತಿವಾದಿಗಳು ದಾವಾ ಪ್ಲಾಟ್ ನಂಬರ್ ನಲ್ಲಿ ಯಾವುದೇ ಸಂಬಂಧ ಇಲ್ಲದಿದ್ದರೂ ಸಹ ಕಬ್ಜಾ ಕೊಡಿಸುವಂತೆ ಈ ದಾವೆಯಲ್ಲಿ ಕೇಳಿದ್ದು, ಸಾಕ್ಷಿಗೆ ಇವುಗಳಲ್ಲಿ ಯಾವುದು ಸರಿ ಎಂಬ ಪ್ರಶ್ನೆಗೆ ಸಾಕ್ಷಿಯು ಯಾವುದೇ ಉತ್ತರ ನೀಡಿರುವುದಿಲ್ಲ. ದಾವಾ ಆಸ್ತಿಯು ಮಂಜೂರಾದ ಕುರಿತು ನನಗೆ ಯಾವುದೇ ಮಾಹಿತಿ ಇಲ್ಲದೇ ಇದ್ದರೂ ಸಹ ನಾನು ಈ ದಾವೆಯನ್ನು ಹೂಡಿರುತ್ತೇನೆ ಎಂದರೆ ಸರಿಯಲ್ಲ. ಸರ್ಕಾರದಿಂದ ಮಂಜೂರಾದ ಆಸ್ತಿಯ ನಂಬರ್, ಚಕ್ಕುಬಂದಿ, ವಿಸ್ತೀರ್ಣದ ಬಗ್ಗೆ ನನಗೆ ಮಾಹಿತಿ ಇಲ್ಲ ಎಂದರೆ ಸರಿಯಲ್ಲ. ದಾವಾ ಆಸ್ತಿಗೂ ಮತ್ತು ನಾನು ಹಾಜರುಪಡಿಸಿರುವ ದಾಖಲೆಗಳಿಗೂ ಯಾವುದೇ ಸಂಬಂದ ಇಲ್ಲ ಎಂದರೆ ಸರಿಯಲ್ಲ. ಸಾಕ್ಷಿಗೆ ಪ್ರತಿವಾದ ಪತ್ರದಲ್ಲಿ ತೋರಿಸಿರುವ ಚಕ್ಕುಬಂದಿಯ ಆಸ್ತಿಯಲ್ಲಿ ಪ್ರತಿವಾದಿಗಳು ಕಬ್ಜಾ ಇರುವುದಾಗಿ ಪ್ರಶ್ನೆ ಕೇಳಿದ್ದು ಸಾಕ್ಷಿಯು ತನ್ನ ಆಸ್ತಿಯಲ್ಲಿ ಕಬ್ಜಾ ಇರುವುದಾಗಿ ನುಡಿಯುತ್ತಾರೆ.

2. ಪ್ಲಾಟ್ ನಂ.44 ತಿಮ್ಮಪ್ಪನಿಗೆ 1987-88 ರಲ್ಲಿ ಮಂಜೂರಾಗಿರುತ್ತದೆ ಎಂದರೆ ನನಗೆ ಗೊತ್ತಿಲ್ಲ. 1989 ರಲ್ಲಿಯೇ ಮನೆ ಕಟ್ಟಿಕೊಂಡಿದ್ದನು ಎಂದರೆ ಸರಿಯಲ್ಲ. ತಿಮ್ಮಣ್ಣನ ಮರಣದ ನಂತರ ಪ್ರತಿವಾದಿಗಳ ಹೆಸರಿಗೆ ಪ್ಲಾಟ್ ನಂ.44 ವರ್ಗಾವಣೆಯಾಗಿರುತ್ತದೆ ಎಂದರೆ ನನಗೆ ಗೊತ್ತಿಲ್ಲ. ನಾನು ಈ ಪೂರ್ದಲ್ಲಿ ಸಲ್ಲಿಸಿದ ದಾವೆಯ ಮೇಲ್ಮನವಿ ವಜಾ ಆಗಿರುತ್ತದೆ ಎಂದರೆ ಸರಿ. ನಾನು ಪ್ರತಿವಾದಿಗಳ ಆಸ್ತಿಯನ್ನು ಕಬಳಿಸುವ ಉದ್ದೇಶದಿಂದ ಸುಳ್ಳು ಸಾಕ್ಷಿ ನುಡಿಯುತ್ತಿದ್ದು ಹಾಗೂ ಸುಳ್ಳು ದಾವೆ ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ ಇಲ್ಲ.

ತೆ.ನ್ಯಾದಲ್ಲಿ ಬೆ.ಮಾಡಲಾಯಿತು. ನನ್ನ ಸಮಕ್ಷಮ

ಸಹಿ

ಓ ಹೇ ಕೆ ಸರಿ ಇದೆ. ಪ್ರಧಾನ ದಿವಾಣಿ ನ್ಯಾಯಾಧೀಶರು,

ರಾಣೇಬೆನ್ನೂರು.